# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1759 (1927) |
| ಸದಸ್ಯರ ಹೆಸರು | : ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 24.03.2026 |
| ಉತ್ತರಿಸುವ ಸಚಿವರು | : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ತುಮಕೂರು-ರಾಯದುರ್ಗ ರೈಲ್ವೇ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ; ಎಷ್ಟು ಎಕರೆ ಪ್ರದೇಶ ಬಾಕಿ ಭೂಸ್ವಾಧೀನಪಡಿಸಿಕೊಳ್ಳಬೇಕಿದೆ; ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು; ಬಳಕೆ ಮಾಡಿಕೊಂಡಿರುವ ಅನುದಾನದ ಮೊತ್ತ ಎಷ್ಟು; | 2007-2008 ನೇ ಸಾಲಿನಲ್ಲಿ ತುಮಕೂರು-ರಾಯದುರ್ಗ ನೂತನ ರೈಲು ಮಾರ್ಗದ (207 ಕಿ.ಮೀ – ಕರ್ನಾಟಕದಲ್ಲಿ 102 ಕಿ.ಮೀ) ಯೋಜನೆಯನ್ನು ಮಂಜೂರು ಮಾಡಲಾಗಿದ್ದು, ಈ ಯೋಜನೆಯ ಅಂದಾಜು ವೆಚ್ಚ ರೂ.1452.55 ಕೋಟಿಗಳು. ಇದರಲ್ಲಿ ರಾಜ್ಯ ಸರ್ಕಾರದ ಪಾಲು ರೂ.520.54 ಕೋಟಿಗಳ ಸಂಪೂರ್ಣ ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ.<br><br>ಈ ಯೋಜನೆಗಾಗಿ ಒಟ್ಟು ಅಗತ್ಯವಿದ್ದ 1395.34 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರಿಲಾಗಿದೆ.<br><br>ಪ್ರಸ್ತುತ ಈ ಯೋಜನೆಯ ಕಾಮಗಾರಿಯು ಶೇ. 70% ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಗಳು ಪ್ರಗತಿಯಲ್ಲಿದೆ.<br><br>ಪ್ರಸ್ತುತ ಸಾಲಿನಲ್ಲಿ ಈ ಯೋಜನೆಗಾಗಿ ರೂ.100.29 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಇದರ ಸಂಪೂರ್ಣ ಬಳಕೆಯಾಗಿರುತ್ತದೆ. |
| (ಆ) | ತುಮಕೂರು-ರಾಯದುರ್ಗ ರೈಲ್ವೇ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; | ಈ ಯೋಜನೆ 2028 ರಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. |
| (ಇ) | ತುಮಕೂರು-ದಾವಣಗೆರೆ ರೈಲ್ವೇ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ; ಎಷ್ಟು ಎಕರೆ ಪ್ರದೇಶ ಬಾಕಿ ಭೂಸ್ವಾಧೀನಪಡಿಸಿಕೊಳ್ಳಬೇಕಿದೆ; ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು; ಬಳಕೆ ಮಾಡಿಕೊಂಡಿರುವ ಅನುದಾನದ ಮೊತ್ತ ಎಷ್ಟು; | 2016-2017 ನೇ ಸಾಲಿನಲ್ಲಿ ತುಮಕೂರು-ದಾವಣಗೆರೆ ನೂತನ ರೈಲು ಮಾರ್ಗ (182 ಕಿ.ಮೀ.) ಯೋಜನೆಯನ್ನು ಮಂಜೂರು ಮಾಡಲಾಗಿದ್ದು, ಈ ಯೋಜನೆಯ ಅಂದಾಜು ವೆಚ್ಚ ರೂ.1801.00 ಕೋಟಿಗಳು. ಇದರಲ್ಲಿ ರಾಜ್ಯ ಸರ್ಕಾರದ ಪಾಲು ರೂ.900.50 ಕೋಟಿಗಳ ಸಂಪೂರ್ಣ ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ.<br><br>ಈ ಯೋಜನೆಗಾಗಿ ಒಟ್ಟು ಅಗತ್ಯವಿರುವ ಒಟ್ಟು 2470.35 ಎಕರೆ ಭೂಮಿ ಪೈಕಿ ಇದುವರೆಗೆ ಸ್ವಾಧೀನಪಡಿಸಿಕೊಂಡಿರುವ ಭೂಮಿ 2330.00 ಎಕರೆಗಳು. ಭೂಸ್ವಾಧೀನಕ್ಕಾಗಿ ಬಾಕಿ ಇರುವ ಭೂಮಿ 140.35 ಎಕರೆಗಳಾಗಿದ್ದು, ಶೇ. 95 ರಷ್ಟು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದೆ. |

| | | |
|---|---|---|
| | | ಪ್ರಸ್ತುತ ಈ ಯೋಜನೆಯ ಕಾಮಗಾರಿಯು ಶೇ. 18 ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಗಳು ಪ್ರಗತಿಯಲ್ಲಿದೆ.<br>ಪ್ರಸ್ತುತ ಸಾಲಿನಲ್ಲಿ ಈ ಯೋಜನೆಗಾಗಿ ರೂ.110.00 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಇದರ ಸಂಪೂರ್ಣ ಬಳಕೆಯಾಗಿರುತ್ತದೆ. |
| (ಈ) | ತುಮಕೂರು-ದಾವಣಗೆರೆ ರೈಲ್ವೇ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; | ಈ ಯೋಜನೆ 2028 ರಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. |

ಮೂಅಇ 95ರಾರಾಹೆ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು